# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.2952/2014/ಸನಿಕಾಸ–2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:15.2.2017

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:** ತುಮಕೂರು ತಾಲ್ಲೂಕಿನ ಹುತ್ತರಿದುರ್ಗದ ಸರ್ವೆ ನಂ.58ರಲ್ಲಿ ಕಲ್ಲುಗಣಿಗಾರಿಕೆಯನ್ನು ತಡೆಗಟ್ಟಲು ಸೂಕ್ತ ಕ್ರಮಕೈಗೊಳ್ಳಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡುವ ಬಗ್ಗೆ.

*******

ಶ್ರೀ ಕನ್ನಡಾಂಬೆ ರಾಮಮೂರ್ತಿ ಗೌಡ, ಮಾಗಡಿ ರಸ್ತೆ, ಬೆಂಗಳೂರು, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ ಆನಂದ.ಎ, ಕಾರ್ಯನಿರ್ವಾಹಕ ಅಧಿಕಾರಿಗಳು, ಗಣಿ ಮತ್ತುಭೂವಿಜ್ಞಾನ ಇಲಾಖೆ, ತುಮಕೂರು,(ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:–**

ದೂರುದಾರರು ತಮ್ಮ ದೂರಿನಲ್ಲಿ ಕುಣಿಗಲ್ ತಾಲ್ಲೂಕು ಹುತ್ತರಿದುರ್ಗದಲ್ಲಿ ನಂಜಯ್ಯ ಎಂಬುವವರ ವಿರುದ್ಧ ಲೋಕೋಪಯೋಗಿ ಇಲಾಖೆಯಲ್ಲಿ ನಡೆದ ಕಾಮಗಾರಿಯಲ್ಲಿ 600 ಕೋಟಿ ಹಗರಣದ ಬಗ್ಗೆ ಅವರ ವಿರುದ್ದ ಲೋಕಾಯುಕ್ತದಲ್ಲಿ ಪ್ರಕರಣ ದಾಖಲಾಗಿ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗಿರುತ್ತದೆ. ಇಂತಹ ಬ್ರಷ್ಟ ವ್ಯಕ್ತಿಗೆ ಎದುರುದಾರರು ಕಲ್ಲು ಗಣಿಗಾರಿಕೆಗೆ ಅನುಮತಿ ನೀಡಿ ಅಪಾರ ಪ್ರಮಾಣದ ಲಂಚ ಪಡೆದಿರುತ್ತಾರೆ. ಈ ಹುತ್ತರಿಬೆಟ್ಟದಲ್ಲಿ ಹಲವು ಪ್ರಾಣಿಗಳಿದ್ದು, ಅಕ್ಕಪಕ್ಕದಲ್ಲಿ ನೂರಾರು ಕುಟುಂಬಗಳು ವಾಸಿಸುತ್ತಿವೆ. ಈ ಬೆಟ್ಟದ ಅಕ್ಕಪಕ್ಕದಲ್ಲಿ ಶಾಲೆ, ದೇವಾಲಯಗಳು ಇದ್ದು, ಆದರೆ ನಂಜಯ್ಯ ನೀಡಿದ ಅಪಾರ ಪ್ರಮಾಣದ ಲಂಚ ಪಡೆದು ಎದುರುದಾರರು ಪರವಾನಿಗೆ ನೀಡಿ ಕಾನೂನನ್ನು ಗಾಳಿಗೆ ತೂರಿರುತ್ತಾರೆ. ಆದ್ದರಿಂದ ಈ ಬಗ್ಗೆ ತನಿಖೆ ಮಾಡಿ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ದೂರು ಸಲ್ಲಿಸಿದ್ದಾರೆ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ವೈ.ಜಿ.ಪುರ ಗ್ರಾಮದ ಸ.ನಂ.58ರಲ್ಲಿ 5 ಎಕರೆ ವಿಸ್ತೀರ್ಣದಲ್ಲಿ ಕಲ್ಲು ಗಣಿ ಗುತ್ತಿಗೆ ನೀಡಲು ಜಂಟಿ ಸ್ಥಳ ಪರಿವೀಕ್ಷಣೆ ಮಾಡಬೇಕೆಂಬ ಉಪನಿರ್ದೇಶಕರ ಪತ್ರ ದಿ.9.1.2014ರಂತೆ 6.2.2014ರಂದು ಉಪನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಭೂವಿಜ್ಞಾನಿಗಳೊಂದಿಗೆ ಪರಿವೀಕ್ಷಣೆ ನಡೆಸಲಾಗಿರುತ್ತದೆ. ಸದರಿ ಸ್ಥಳ ಗೋಮಾಳ ಜಮೀನಾಗಿರುವುದರಿಂದ ಕಂದಾಯ ಇಲಾಖೆಯ ಅಭಿಪ್ರಾಯ ಬೇಕಾಗಿದ್ದು, ಜಂಟಿ ಸ್ಥಳ ಪರಿವೀಕ್ಷಣೆ ನಡೆಸಿದಾಗ ಪ್ರಸ್ತಾವಿತ ಜಮೀನು ವ್ಯವಸಾಯಕ್ಕೆ ಯೋಗ್ಯವಲ್ಲವಾದ್ದರಿಂದ ಗಣಿಗಾರಿಕೆಗೆ ಪರವಾನಿಗೆ ನೀಡಬಹುದೆಂದು ಅಭಿಪ್ರಾಯ ನೀಡಲಾಗಿರುತ್ತದೆ. ಕಲ್ಲು ಗಣಿ ಗುತ್ತಿಗೆ ಪರವಾನಿಗೆ ಮಂಜೂರು ಮಾಡುವ ಅಧಿಕಾರ ಜಿಲ್ಲಾಧಿಕಾರಿಗಳಿಗೆ ಮಾತ್ರ ಇರುತ್ತದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರ ಸಲ್ಲಿಸಿರುವುದಿಲ್ಲ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ಎದುರುದಾರರು ಜಂಟಿ ಪರಿಶೀಲನಾ ವರದಿ ನೀಡಿದ್ದು ದೂರಿನಲ್ಲಿ ಆಪಾದಿಸಿರುವ ನಂಜಪ್ಪ ಇವರಿಗೆ ವೈಜಿಪುರ ಸ.ನಂ.58 ಕ್ಷೇತ್ರ 5 ಎಕರೆ ಜಮೀನಿನಲ್ಲಿ ಕಲ್ಲು ಗಣಿ ಗುತ್ತಿಗೆ ಪರವಾನಿಗೆ ನೀಡಬಹುದೆಂದು ವರದಿ ನೀಡಿರುತ್ತಾರೆ. ಆದರೆ ದೂರಿನಲ್ಲಿ ಆಪಾದಿಸಿರುವಂತೆ ಎದುರುದಾರರು ಲಂಚ ಪಡೆದು ವರದಿ ನೀಡದ ಬಗ್ಗೆಯಾಗಲೀ ಅಥವಾ ನಂಜಯ್ಯನ ವಿರುದ್ಧ ಲೋಕಾಯುಕ್ತದಲ್ಲಿ ಪ್ರಕರಣ ದಾಖಲಾದ ಬಗ್ಗೆಯಾಗಲೀ ಯಾವುದೇ ದಾಖಲೆಗಳು ಲಭ್ಯವಿರುವುದಿಲ್ಲ.

6. ಎದುರುದಾರರ ಪ್ರಕಾರ ಕಲ್ಲುಗಣಿಗಾರಿಕೆಗೆ ಜಿಲ್ಲಾಧಿಕಾರಿಗಳು ಅನುಮತಿ ನೀಡಬೇಕಾಗುವುದರಿಂದ ಇದರಲ್ಲಿ ಎದುರುದಾರರ ಪಾತ್ರ ಕಂಡುಬರುವುದಿಲ್ಲ. ಆದ್ದರಿಂದ ಎದುರುದಾರರು ಲಂಚ ಪಡೆದು ಜಂಟಿ ಸ್ಥಳ ತನಿಖಾ ವರದಿ ಸಲ್ಲಿಸಿದ್ದಾರೆ ಎನ್ನುವುದಕ್ಕೆ ಯಾವುದೇ ಸಾಕ್ಷ್ಯಾಧಾರಗಳು ಇರುವುದಿಲ್ಲ. ಆದ್ದರಿಂದ ಎದುರುದಾರರ ಕರ್ತವ್ಯಲೋಪ ದೃಢಪಟ್ಟಿರುವುದಿಲ್ಲ.

7. ಆದರೆ ಹುತ್ತರಿದುರ್ಗ ಹೋಬಳಿಯಲ್ಲಿರುವ ಸರ್ವೆ ನಂ.58ರ ಅಕ್ಕಪಕ್ಕದಲ್ಲಿ ಜನರು ವಾಸಿಸುತ್ತಿದ್ದು, ಹಾಗೂ ಈ ಪ್ರದೇಶ ಬೆಟ್ಟಗುಡ್ಡಗಳಿಂದ ಕೂಡಿರುವುದರಿಂದ ಇಲ್ಲಿ ಕಾಡುಪ್ರಾಣಿಗಳು, ದೇವಾಲಯಗಳು ಇದ್ದು, ಈ ಕಲ್ಲುಗಣಿಗಾರಿಕೆಯಿಂದ ತೊಂದರೆಯುಂಟಾಗುತ್ತಿದೆಯೆಂದು ದೂರುದಾರರು ತಮ್ಮ ದೂರಿನಲ್ಲಿ

ನಮೂದಿಸಿದ್ದಾರೆ. ಪರಿಸರ ದೃಷ್ಟಿಯಿಂದಲೂ ಇಂತಹ ಕಲ್ಲು ಗಣಿಗಾರಿಕೆಯನ್ನು ತಡೆಯುವುದು ಅಗತ್ಯವಿರುತ್ತದೆ. ಅಲ್ಲದೆ ಈ ಪ್ರದೇಶದಲ್ಲಿ ಕಲ್ಲು ಗಣಿಗಾರಿಕೆ ತಡೆಗಟ್ಟಬೇಕೆಂದು ಮಠಾಧೀಶರು, ಸಾರ್ವಜನಿಕರು ಹೋರಾಟ ಮಾಡಿದ ಬಗ್ಗೆ ಸುದ್ದಿ ಪತ್ರಿಕೆಗಳಲ್ಲಿ ವರದಿಯಾದ ದಾಖಲೆಗಳು ಲಭ್ಯವಿರುತ್ತವೆ.

8. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ತುಮಕೂರು ತಾಲ್ಲೂಕಿನ ಹುತ್ತರಿದುರ್ಗದ ಸರ್ವೆ ನಂ.58ರಲ್ಲಿ ಕಲ್ಲುಗಣಿಗಾರಿಕೆಯನ್ನು ತಡೆಗಟ್ಟಲು ಸೂಕ್ತ ಕ್ರಮಕೈಗೊಳ್ಳಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡಬೇಕೆಂದು ಸಕ್ಷಮ ಪ್ರಾಧಿಕಾರವನ್ನು ಕೋರಲಾಗಿದೆ.

9. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

Sd/- 15.2.17.

[ ನ್ಯಾಯಮೂರ್ತಿ ಸುಭಾಷ್ ಬಿ ಆಡಿ]
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ.

15/2